**Akashvani : Bangalore**
**Regional Bulletin In Kannada**
**02.09.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಬೆಳೆಹಾನಿ ಅನುಭವಿಸಿದ ರೈತರಿಗೆ ಸರ್ಕಾರದಿಂದ ಸೂಕ್ತ ಪರಿಹಾರ ; ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಭರವಸೆ

೨. ರಾಜ್ಯವನ್ನು ವಿಶೇಷವಾಗಿ ಪರಿಗಣಿಸುವಂತೆ ನೀತಿ ಆಯೋಗಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮನವಿ

೩. ರಾಜ್ಯದಲ್ಲಿ ಅಕ್ರಮವಾಗಿ ಸಕ್ಕರೆ ದಾಸ್ತಾನು ಮಾಡಿದರೆ ಕಠಿಣ ಕ್ರಮ ; ಸಚಿವ ರಿಜ್ವಾನ್ ಅರ್ಷದ್ ಎಚ್ಚರಿಕೆ

೪. ತಾವರೆಕೆರೆ-ಗೊಟ್ಟಿಗೆರೆ ನಡುವಿನ ಮೆಟ್ರೋ ಪರೀಕ್ಷಾ ಸಂಚಾರ ಪರಿಶೀಲಿಸಿದ ಸಚಿವ ಕೃಷ್ಣಬೈರೇಗೌಡ

೫. ಬೆಂಗಳೂರಿನಲ್ಲಿ ಉದ್ಯಾನವನ ಕಬಳಿಕೆ ವಿರುದ್ಧ ಪ್ರತಿಭಟನೆಗೆ ಬಿಜೆಪಿ ನಿರ್ಧಾರ

---

ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಇಂದು ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ವಿವಿಧೆಡೆ ಬರ ಪರಿಶೀಲನೆ ನಡೆಸಿದರು.

ಈ ವೇಳೆ ಕೃಷಿ ಮತ್ತು ತೋಟಗಾರಿಕೆ ಬೆಳೆ ಹಾನಿ, ಜಾನುವಾರುಗಳಿಗೆ ಮೇವಿನ ಕೊರತೆ, ವಿಬಿ ಜಿ ರಾಮ್ ಜಿ ಯೋಜನೆಗಳಿಗೆ ಜನರಿಗೆ ಉದ್ಯೋಗ ನೀಡಿ ಕೈಗೊಂಡಿರುವ ಕಾಮಗಾರಿಯನ್ನು ಪರಿಶೀಲಿಸಿದರು. ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ನಿಗಾವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಹಾನಿ ಅನುಭವಿಸುತ್ತಿರುವ ರೈತರಿಗೆ ಸೂಕ್ತ ಪರಿಹಾರ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

ಈ ಬಾರಿ ರಾಜ್ಯ ಸರ್ಕಾರ ಸಲ್ಲಿಸುವ ವರದಿಗೆ ಅನುಗುಣವಾಗಿ ಪರಿಹಾರ ಬಿಡುಗಡೆ ಮಾಡಬೇಕು ಎಂದು ಕೇಂದ್ರ ಸರ್ಕಾರವನ್ನು ಆಗ್ರಹಿಸಿದ್ದಾರೆ.

---

ಕೇಂದ್ರ ಸರ್ಕಾರ ಬಜೆಟ್‌ನಲ್ಲಿ ಈ ಹಿಂದೆ ಘೋಷಿಸಿದ ಅನುದಾನ ಸೇರಿದಂತೆ ರಾಜ್ಯಕ್ಕೆ ನೀಡಬೇಕಾಗಿರುವ ಅನುದಾನ ಹಂಚಿಕೆಯ ಪಾಲನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೀತಿ ಆಯೋಗಕ್ಕೆ ಮನವಿ ಮಾಡಿದ್ದಾರೆ.

ಆಯೋಗದ ಉಪಾಧ್ಯಕ್ಷ ಡಾ.ಅಶೋಕ್ ಕುಮಾರ್ ಲಾಹಿರಿ ಅವರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಹಲವು ಅಭಿವೃದ್ಧಿ ಸೂಚ್ಯಂಕಗಳಲ್ಲಿ ರಾಜ್ಯ ದೇಶದಲ್ಲಿ ಮುಂಚೂಣಿಯಲ್ಲಿದೆ. ಈ ಹಿನ್ನೆಲೆಯಲ್ಲಿ ನೀತಿ ಆಯೋಗ ಕರ್ನಾಟಕವನ್ನು ವಿಶೇಷವಾಗಿ ಪರಿಗಣಿಸುವಂತೆ ಮನವಿ ಮಾಡಿದ್ದಾರೆ.

---

ಸಕ್ಕರೆ ಬೆಲೆಯಲ್ಲಿ ದಿಢೀರ್ ಏರಿಕೆಯಾಗಿದ್ದು, ರಾಜ್ಯದಲ್ಲಿ ಅಕ್ರಮವಾಗಿ ಸಕ್ಕರೆ ದಾಸ್ತಾನು ಮಾಡಿಕೊಂಡಿದ್ದಲ್ಲಿ ಪರಿಶೀಲನೆ ನಡೆಸುವಂತೆ ಅಧಿಕಾರಿಗಳಿಗೆ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಸಚಿವ ರಿಜ್ವಾನ್ ಅರ್ಷದ್ ಸೂಚಿಸಿದ್ದಾರೆ.

ಮೈಸೂರಿನಲ್ಲಿಂದು ಆಹಾರ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿದ ಅವರು, ಎಲ್‌ಪಿಜಿ ಸಿಲಿಂಡರ್‌ಗಳು ನಿಗದಿತ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಸಂಗ್ರಹಣೆಯಾಗಿದ್ದಲ್ಲಿ ಕಾನೂನು ರೀತಿ ಕ್ರಮಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

ಅಧಿಕಾರಿಗಳು ಅಕ್ರಮ ಆಹಾರ ದಾಸ್ತಾನು ಮಾಡಿರುವ ಸ್ಥಳಗಳ ಮೇಲೆ ಹೆಚ್ಚು ದಾಳಿ ನಡೆಸಬೇಕು. ಇ-ಕೆವೈಸಿ ಮಾಡದವರ ಬಗ್ಗೆ ಅಧಿಕಾರಿಗಳು ಹೆಚ್ಚು ನಿಗಾವಹಿಸಿ ಪೂರ್ಣಗೊಳಿಸಬೇಕು ಎಂದು ಸೂಚಿಸಿದ್ದಾರೆ.

---

ಬೆಂಗಳೂರಿನ ತಾವರೆಕರೆ-ಗೊಟ್ಟಿಗೆರೆ ನಡುವಿನ ಮೆಟ್ರೋ ಪರೀಕ್ಷಾ ಸಂಚಾರವನ್ನು ಜಿಬಿಎ ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಇಂದು ಜಯದೇವ ಆಸ್ಪತ್ರೆ ಬಳಿಯ ನಿಲ್ದಾಣಕ್ಕೆ ತೆರಳಿ ಸಂಸದ ತೇಜಸ್ವಿ ಸೂರ್ಯ ಅವರೊಂದಿಗೆ ಪರಿಶೀಲನೆ ನಡೆಸಿದರು.

ಇದೇ ವೇಳೆ ಮೆಟ್ರೋ ಲೋಕೋ ಪೈಲೆಟ್ ಕ್ಯಾಬಿನ್‌ನಲ್ಲಿ ಅಧಿಕಾರಿಗಳಿಂದ ಮಾಹಿತಿ ಕಲೆ ಹಾಕಿದರು. ನಿರ್ಮಾಣ ಹಂತದಲ್ಲಿರುವ ಗೊಟ್ಟಿಗೆರೆ ಮೆಟ್ರೋ ನಿಲ್ದಾಣದಲ್ಲಿ ಕಾಮಗಾರಿ, ಭದ್ರತೆ, ಸಂಚಾರ ವ್ಯವಸ್ಥೆಯ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಇದೇ ವೇಳೆ ಸಂಸದ ತೇಜಸ್ವಿ ಸೂರ್ಯ ಮೆಟ್ರೋ ಅಭಿವೃದ್ಧಿ ಕುರಿತ ಮನವಿ ಪತ್ರವನ್ನು ಸಚಿವ ಕೃಷ್ಣಬೈರೇಗೌಡ ಅವರಿಗೆ ನೀಡಿದರು.

---

ಸವಾಲುಗಳನ್ನು ಮೆಟ್ಟಿ ಉದ್ದಿಮೆ ಕಟ್ಟಿರುವ ಮಹಿಳೆಯರು ಎಲ್ಲರಿಗೂ ಮಾದರಿ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣ್ಣಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಮಹಿಳಾ ಉದ್ಯಮಿಗಳ ಸಂಘಗಳ ಒಕ್ಕೂಟದ ಟುಗೆದರ್ ವಿ ಗ್ರೋ ಅಂತಾರಾಷ್ಟ್ರೀಯ ಮಹಿಳಾ ಉದ್ಯಮಶೀಲತಾ ದಿನಾಚರಣೆಯ ೫ನೇ ಆವೃತ್ತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳಾ ಸಬಲೀಕರಣಕ್ಕೆ ತಮ್ಮ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ. ಗ್ಯಾರಂಟಿಗಳ ಮೂಲಕ ಕುಟುಂಬ ನಿರ್ವಹಣೆಗೆ ಸರ್ಕಾರ ಮಹಿಳೆಯರಿಗೆ ನೆರವು ನೀಡುತ್ತಿದೆ ಎಂದು ಹೇಳಿದ್ದಾರೆ. ಉಬುಂಟು ಮೂಲಕ ಸಾವಿರಾರು ಕನಸುಗಳು ಒಂದಾಗಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನ ಟನಲ್ ಯೋಜನೆ ಪರವಾಗಿ ಉದ್ಯಮಿಗಳು ಧ್ವನಿ ಎತ್ತಬೇಕು ಎಂದು ಕರೆ ನೀಡಿದ್ದಾರೆ.

---

ಕೆಆರ್‌ಐಡಿಎಲ್‌ನಲ್ಲಿ ಶೇಕಡ ೭೦ರಷ್ಟು ಲಂಚ ಪಡೆಯುತ್ತಿರುವ ಇಬ್ಬರು ಸಚಿವರನ್ನು ಕೂಡಲೇ ವಜಾಮಾಡಿ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅವರ ಪಕ್ಷದ ಶಾಸಕರೇ ಮುಖ್ಯಮಂತ್ರಿಗೆ ಅಧಿಕೃತವಾಗಿ ಪತ್ರ ಬರೆದು, ಭ್ರಷ್ಟಾಚಾರದ ವಿರುದ್ಧ ಕ್ರಮಕೈಗೊಳ್ಳುವಂತೆ ಮನವಿ ಮಾಡಿರುವುದೇ ಪ್ರಮುಖ ಸಾಕ್ಷ್ಯ ಎಂದು ತಿಳಿಸಿದ್ದಾರೆ. ಉದ್ಯಾನ ಕಬಳಿಕೆ ಕುರಿತಂತೆ ಇದೇ ಶನಿವಾರ ಹಾಗೂ ಭಾನುವಾರ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಸುರಂಗ ರಸ್ತೆ ಯೋಜನೆಯಲ್ಲಿ ಪಾರ್ಕಿಂಗ್‌ನ ಅಗತ್ಯವಿಲ್ಲ. ಮಾಲ್ ನಿರ್ಮಾಣ ಮಾಡಲು ಲಾಲ್‌ಬಾಗ್ ಜಾಗವನ್ನು ಬಳಸಲು ನಿರ್ಧರಿಸಲಾಗಿದೆ ಎಂದು ಆರೋಪಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಪಾರ್ಕ್ ಉಳಿಸಿ, ಬೆಂಗಳೂರು ರಕ್ಷಿಸಿ ಎಂಬ ಅಭಿಯಾನ ನಡೆಸಲಾಗುವುದು ಎಂದು ಹೇಳಿದ್ದಾರೆ.

---

ರಾಜ್ಯ ತೀವ್ರ ಬರಗಾಲ ಎದುರಿಸುತ್ತಿದ್ದು, ಕೆಲವು ತಾಲೂಕುಗಳನ್ನು ಇನ್ನು ಬರಪೀಡಿತ ಎಂದು ಘೋಷಿಸಲಾಗಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಯಚೂರಿನ ಬೇಡರ್‌ಕಾರ್ಲುಕುಂಟೆಯಲ್ಲಿ ಪಾದಯಾತ್ರೆಯಲ್ಲಿ ಭಾಗವಹಿಸಿದ್ದ ಅವರು, ಬರಪರಿಸ್ಥಿತಿ ಮತ್ತು ರಾಗಿ ಬೆಳೆಗಳನ್ನು ರೈತರ ಹೊಲಗಳಿಗೆ ತೆರಳಿ ಪರಿಶೀಲಿಸಿದರು. ಪರಿಶಿಷ್ಟರ ಕಲ್ಯಾಣಕ್ಕ ಕಾಂಗ್ರೆಸ್ ಸರ್ಕಾರದ ಬದ್ಧತೆಯನ್ನು ಅವರು ಪ್ರಶ್ನಿಸಿದ್ದಾರೆ. ರಾಜ್ಯದಲ್ಲಿರುವುದು ಪರಿಶಿಷ್ಟ ವಿರೋಧಿ ಹಾಗೂ ಬಡವರ ವಿರೋಧಿ ಸರ್ಕಾರ ಎಂದು ದೂರಿದ್ದಾರೆ.

---

ಕೆಪಿಎಸ್‌ಸಿ ವಿಚಾರವಾಗಿ ಬಿಜೆಪಿ ನಡೆಸುತ್ತಿರುವ ಪಾದಯಾತ್ರೆ ಅವರ ಪಕ್ಷದಲ್ಲಿನ ಆಂತರಿಕ ಬಿಕ್ಕಟ್ಟು ಮುಚ್ಚಿ ಹಾಕಲು ನಡೆಸುತ್ತಿರುವ ಪ್ರಯತ್ನ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಪಿಎಸ್‌ಸಿ ಅಕ್ರಮದಲ್ಲಿ ಬಿಜೆಪಿ ನಾಯಕರ ಸಂಪರ್ಕದ ಬಗ್ಗೆ ಮಾಹಿತಿ ಲಭ್ಯವಾಗಿದೆ. ಕೆಪಿಎಸ್‌ಸಿ ಹಗರಣಗಳ ಪಿತಾಮಹಾ ಎನ್‌ಡಿಎ ಎಂದು ಆರೋಪಿಸಿದ್ದಾರೆ.

ಕೆಪಿಎಸ್‌ಸಿ ಅಧ್ಯಕ್ಷರನ್ನು ನೇಮಕ ಮಾಡಿದ್ದು, ಬಿಜೆಪಿ ಹೀಗಾಗಿ ಅವರೊಂದಿಗೆ ಸಂಪರ್ಕ ಹೊಂದಿದವರು ಯಾರು ಎಂಬ ಬಗ್ಗೆ ಪರಿಶೀಲನೆ ನಡೆಸಬೇಕು ಎಂದು ತಿಳಿಸಿದ್ದಾರೆ.

---

ವಿಜಯಪುರದಲ್ಲಿ ಉದ್ಘಾಟನೆಗೆ ಸಜ್ಜಾಗಿರುವ ವಿಮಾನ ನಿಲ್ದಾಣದಲ್ಲಿ ಮಹಾರಾಷ್ಟ್ರದ ಮೂಲದ ಕಾರ್ವರ್ ಏವಿಯೇಷನ್ ಸಂಸ್ಥೆಯು ವಿಮಾನ ಚಾಲನಾ ತರಬೇತಿ ಅಕಾಡಮಿ ಸ್ಥಾಪಿಸಲು ಆಸಕ್ತಿ ತೋರಿದೆ.

ಇದರಿಂದ ಸ್ಥಳೀಯ ವಿದ್ಯಾರ್ಥಿಗಳು ಮತ್ತು ಯುವಜನರಿಗೆ ಹೆಚ್ಚಿನ ಉದ್ಯೋಗವಕಾಶ ಸೃಷ್ಟಿಯಾಗಲಿದೆ. ಈ ಕುರಿತಂತೆ ಮತ್ತೊಂದು ಸಭೆ ನಡೆಸಿ ರೂಪುರೇಷೆ ನಿರ್ಧರಿಸಲಾಗುವುದು ಎಂದು ಮೂಲಸೌಕರ್ಯ ಅಭಿವೃದ್ಧಿ ಹಾಗೂ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ವಿಜಯಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಮಾನ ಹಾರಾಟ ತರಬೇತಿ ಅಕಾಡೆಮಿ ಕಾರ್ಯಾರಂಭ ಮಾಡಿದರೆ ನಿಲ್ದಾಣದ ರನ್‌ವೇ, ಟ್ಯಾಕ್ಸಿವೇ, ಏಪ್ರಾನ್ ಇವುಗಳನ್ನು ಕಂಪನಿ ಬಳಸಿಕೊಳ್ಳಲು ಅವಕಾಶವಿರಲಿದೆ ಎಂದು ಹೇಳಿದ್ದಾರೆ.

---

ಮಂಗಳೂರು ದಸರಾವನ್ನು ಶ್ರದ್ಧಾಪೂರ್ವಕವಾಗಿ ಆಚರಿಸಲು ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದಸರಾವನ್ನು ಸಂಸ್ಕೃತಿ, ಪಾರಂಪರಿಕ ಹಿನ್ನೆಲೆಯೊಂದಿಗೆ ನಡೆಸಲು ಸಲಹೆ ನೀಡಿದ್ದಾರೆ. ಮಂಗಳೂರಿನ ಗೋಕರ್ಣನಾಥ ಕ್ಷೇತ್ರ, ಮಂಗಳಾದೇವಿ, ಮಾರಿಗುಡಿ, ವೆಂಕಟರಮಣ ದೇವಸ್ಥಾನ ಸೇರಿದಂತೆ ಎಲ್ಲಾ ದೇವಾಲಯಗಳನ್ನು ಕ್ರೋಢೀಕರಿಸಿಕೊಂಡು ದಸರಾ ಆಚರಿಸಲಾಗುತ್ತಿದೆ. ಇದರ ಭಾಗವಾಗಿ ಉಳ್ಳಾಲದಲ್ಲಿ ಪ್ರಥಮ ಬಾರಿಗೆ ಯುವ ದಸರಾ ನಡೆಸಲು ತೀರ್ಮಾನಿಸಲಾಗಿದೆ ಎಂದು ಹೇಳಿದ್ದಾರೆ.

---

ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ವಿರುದ್ಧ ಉತ್ತರಾಖಂಡ್ ಪೊಲೀಸರು ಎಫ್‌ಐಆರ್ ದಾಖಲು ಮಾಡಿರುವುದನ್ನು ಖಂಡಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಪ್ರತಿಭಟನೆ ನಡೆಸಿತು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ನೂರು ಪ್ರಕರಣ ದಾಖಲಿಸಿದರು ರಾಹುಲ್‌ಗಾಂಧಿ ಕ್ಷಮೆ ಕೇಳಲ್ಲ ಎಂದು ತಿಳಿಸಿದ್ದಾರೆ.

ಈ ವೇಳೆ ಮಾತನಾಡಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಹುಲ್‌ಗಾಂಧಿ, ಯಾವ ತಪ್ಪು ಮಾಡದಿದ್ದರೂ ಪ್ರಕರಣ ದಾಖಲಿಸಲಾಗಿದೆ. ಇದರ ವಿರುದ್ಧ ರಾಜ್ಯವ್ಯಾಪಿ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

---

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ಅನ್ಯಾಯವಾದ ಸಂದರ್ಭದಲ್ಲಿ ಭಯಪಡದೆ ಆಯೋಗದ ಗಮನಕ್ಕೆ ತರಬೇಕು ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ. ಮೂರ್ತಿ ಎಲ್. ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಯೊಂದು ದೂರನ್ನು ಕಾನೂನುಬದ್ಧವಾಗಿ ಪರಿಶೀಲಿಸಿ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಆಯೋಗ ಕಾರ್ಯನಿರ್ವಹಿಸಲಿದೆ ಎಂದು ಹೇಳಿದ್ದಾರೆ.

---

ಸಂಕ್ಷಿಪ್ತ ಸುದ್ದಿಗಳು-೧

೧. ವಿಜಯನಗರ ಜಿಲ್ಲೆಯ ಕೂಡ್ಲಿಗಿ ಮತ್ತು ಕೊಟ್ಟೂರು ತಾಲೂಕುಗಳನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರ್ಪಡೆ ಮಾಡಲು ಸರ್ಕಾರದ ಮೇಲೆ ಒತ್ತಡ ತರಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್.ಬಸವಂತಪ್ಪ ತಿಳಿಸಿದ್ದಾರೆ.

೨. ಮಡಿವಾಳ ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸುವಂತೆ ಒತ್ತಾಯಿಸಿ ಇದೇ ೯ರಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಮಡಿವಾಳ ಮಾಚಿದೇವ ಸಮಾಜ ಸಂಘಟನೆಯ ರಾಜ್ಯಾಧ್ಯಕ್ಷ ನಂಜಪ್ಪ ಚಿಂತಾಮಣಿಯಲ್ಲಿ ತಿಳಿಸಿದ್ದಾರೆ.

೩. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಭಾರತ್‌ಮಾಲಾ ಯೋಜನೆಯಡಿ ನಿರ್ಮಾಣವಾಗುತ್ತಿರುವ ಚೆನ್ನೈ-ಸೂರತ್ ರಾಷ್ಟ್ರೀಯ ಹೆದ್ದಾರಿಯ ಪ್ಯಾಕೇಜ್-೩ರ ಕಾಮಗಾರಿಯನ್ನು ಸಂಸದ ಜಿ.ಕುಮಾರ ನಾಯಕ ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನಲ್ಲಿ ಪರಿಶೀಲನೆ ನಡೆಸಿದರು.

೪. ಉಡುಪಿಯಲ್ಲಿ ಶ್ರೀ ಕೃಷ್ಣ ಜಯಂತಿ ಆಚರಣೆಯು ಇದೇ ೪ ರಂದು ವಳಕಾಡು ಸರಕಾರಿ ಸಂಯುಕ್ತ ಪ್ರೌಢಶಾಲೆಯಲ್ಲಿ ನಡೆಯಲಿದೆ. ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ರಿಜ್ವಾನ್ ಅರ್ಷದ್ ಉದ್ಘಾಟಿಸಲಿದ್ದಾರೆ.

೫. ಉತ್ತರಕನ್ನಡ ಜಿಲ್ಲೆಯಲ್ಲಿ ವಿಕಸಿತ ಭಾರತ್ ಗ್ಯಾರಂಟಿ ಫಾರ್ ರೋಜಗಾರ್ ಮತ್ತು ಅಜೀವಿಕಾ ಮಿಷನ್ ವಿಬಿಜಿ ರಾಮ್ ಜಿ ಯೋಜನೆಯಡಿ ೩೧೮ ಕಾಮಗಾರಿಗಳನ್ನು ನೀಡಲಾಗುತ್ತಿದ್ದು, ಈ ಯೋಜನೆ ಮೂಲಕ ಗ್ರಾಮದ ಸಮಗ್ರ ಅಭಿವೃದ್ಧಿಗೆ ಗ್ರಾಮಸ್ಥರು ಕೈಜೋಡಿಸಬೇಕು ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಈರಪ್ಪ ಲಮಾಣಿ ತಿಳಿಸಿದ್ದಾರೆ.

೬. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ದಸರಾ ಕ್ರೀಡಾ ಸ್ಪರ್ಧೆಗಳನ್ನು ಇದೇ ೪ರಿಂದ ಆಯಾ ತಾಲೂಕುಗಳಲ್ಲಿ ಜಿಲ್ಲೆಯ ಆಸಕ್ತ ಕ್ರೀಡಾಪಟುಗಳು ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಬಹುದಾಗಿದೆ.

೭. ಉತ್ತರಕನ್ನಡ ಜಿಲ್ಲೆಯಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ಇತರ ನಿಗಮಗಳಿಂದ ಶಿಕ್ಷಣ, ಉದ್ಯೋಗ ಸೇರಿದಂತೆ ವಿವಿಧ ಚಟವಟಿಕೆಗಳಿಗೆ ಸಾಲ ಸೌಲಭ್ಯ ಒದಗಿಸಲು ಅರ್ಜಿ ಆಹ್ವಾನಿಸಲಾಗಿದೆ.

__________ ಮುಕ್ತಾಯ _________